ಆ) ಸಂಖ್ಯೆ ಗ್ರಾಅಪ:14:ಐಎವೈ:99, ದಿನಾಂಕ 11-1-2000ರ ಸುತ್ತೋಲೆಯಲ್ಲಿ ವಿವರವಾಗಿ ಮಾರ್ಗಸೂಚಿಗಳನ್ನು ನೀಡಲಾಗಿದೆ.

ಅವ್ಯವಹಾರ ನಡೆದಿರುವ ಬಗ್ಗೆ ದಿನಾಂಕ 13-5-2003ರ ಸರ್ಕಾರದ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ರಾಯಚೂರು ರವರಿಂದ ಕೋರಲಾಗಿದೆ.

ಧಾರವಾಡ ಜಿಲ್ಲೆಯ ಖಾಸಗಿ ಪ್ರಾಥಮಿಕ ಶಾಲಾ ಮಕ್ಕಳು ಬಿಸಿಯೂಟ ನೀಡಬೇಕೆಂದು ಪ್ರತಿಭಟನೆ ಮಾಡುತ್ತಿರುವ ಬಗ್ಗೆ

2919 (3175) ಶ್ರೀ ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯತ್ ಖಾನ್ (ಹುಬ್ಬಳ್ಳಿ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಧಾರವಾಡ ಜಿಲ್ಲೆಯಾದ್ಯಂತ .ಖಾಸಗಿ ಪ್ರಾಥಮಿಕ ಶಾಲಾ ಮಕ್ಕಳು ಮಧ್ಯಾಹ್ನದ ಬಿಸಿ ಊಟ ನಮಗೂ ಬೇಕೆಂದು ಪ್ರತಿಭಟಿಸಿ ಮೆರವಣಿಗೆ ಮಾಡಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಖಾಸಗಿ ಪ್ರಾಥಮಿಕ ಶಾಲೆಗಳಿಗೂ ಸಹ ಮಧ್ಯಾಹ್ನದ ಬಿಸಿ ಊಟದ ಯೋಜನೆ ಒಳಪಡಿಸುವ ವಿಚಾರ ಸರ್ಕಾರದ ಗಮನದಲ್ಲಿದೆಯೇ;

ಇ) ಸರ್ಕಾರಿ ಖಾಸಗಿ ಶಾಲೆಗಳಲ್ಲಿ ಮಕ್ಕಳು ಎಲ್ಲರೂ ಒಂದೇ ಎಂಬ ಸಮಭಾವನೆಯಿಂದ ಖಾಸಗಿ ಶಾಲಾ ಮಕ್ಕಳಿಗೂ ಮಧ್ಯಾಹ್ನದ ಬಿಸಿ ಊಟದ ವ್ಯವಸ್ಥೆ ಮಾಡುವುದು ಯೋಗ್ಯವೇ;

ಈ) ಇಲ್ಲವಾದಲ್ಲಿ ಕಾರಣಗಳೇನು?

ಶ್ರೀ ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಬಂದಿದೆ.

ಆ) ಸರ್ಕಾರದ ಗಮನದಲ್ಲಿದ್ದಾಗ್ಯೂ ರಾಜ್ಯದ ಆರ್ಥಿಕ ಪರಿಸ್ಥಿತಿಯ ಹಿನ್ನಲೆಯಲ್ಲಿ ಇದು ಸಧ್ಯಕ್ಕೆ ಸಾಧ್ಯವಾಗುತ್ತಿಲ್ಲ.

ಇ) ಯೋಗ್ಯವಿದ್ದಾಗ್ಯೂ ಸಧ್ಯದಲ್ಲಿ ಇವರುಗಳಿಗೆ ವಿಸ್ತರಿಸಲು ಸರ್ಕಾರದ ಮುಂದಿಲ್ಲ.

ಈ) ಪ್ರಶ್ನೆ ಉದ್ಭವಿಸುವುದಿಲ್ಲ.

ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯರುಗಳ ಹುದ್ದೆಗಳು

2920 (3289) ಶ್ರೀ ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯತ್ ಖಾನ್ (ಹುಬ್ಬಳ್ಳಿ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ವೈದ್ಯರುಗಳ, ಶುಶ್ರೂಷಕಿಯರ ಪ್ರಯೋಗಾಲಯ ತಜ್ಞರುಗಳ, ಗುಮಾಸ್ತರ ಹುದ್ದೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು);

ಆ) 1-1-2001 ರಿಂದ 30-5-2003ರ ವರೆಗೆ ಖಾಲಿ ಇದ್ದ ವೈದ್ಯರ ಹುದ್ದೆಗಳನ್ನು ಯಾವ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)?

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಸರ್ಕಾರಿ ಆಸ್ಪತ್ರೆಗಳಲ್ಲಿ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಒಟ್ಟು 451 ವೈದ್ಯರುಗಳು, 543 ಶುಶ್ರೂಷಕಿಯರು, 1252 ಪ್ರಯೋಗಶಾಲಾ ತಂತ್ರಜ್ಞರು, 885 ಗುಮಾಸ್ತರ ಹುದ್ದೆಗಳು ಖಾಲಿ ಇರುತ್ತವೆ. (ಜಿಲ್ಲಾವಾರು ಪಟ್ಟಿ ಲಗತ್ತಿಸಿದೆ).